# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2012-13ನೇ ಸಾಲಿನಲ್ಲಿ ಭಾರತ ಸಂವಿಧಾನ ಅನುಚ್ಛೇದ 275(1)ರಡಿ ಪರಿಶಿಷ್ಟ ವರ್ಗದ ಏಕಲವ್ಯ ಮಾದರಿ ವಸತಿ ಶಾಲೆಗಳ ಕಟ್ಟಡ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:

1. ಭಾರತ ಸರ್ಕಾರದ ಪತ್ರ ಸಂಖ್ಯೆ: 14020; 3; 2010-ಎಸ್‌ಜಿ-1, ದಿನಾಂಕ:30.07.2010.
2. ಸರ್ಕಾರದ ಆದೇಶ ಸಂಖ್ಯೆ:ಸಕಇ 218 ಪವಯೋ 2010 ದಿನಾಂಕ:4.12.2010
3. ಭಾರತ ಸರ್ಕಾರದ ಪತ್ರ ಸಂಖ್ಯೆ:14020:4(11):2011-ಎಸ್‌ಜಿ-1 ದಿನಾಂಕ:29.03.2012
4. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರ ಏಕಕಡತ ಸಂಖ್ಯೆ:ಪವಕನಿ:ಇಡಿ-2:ಸಿಆರ್108:09-10 ದಿನಾಂಕ:22.11.2012
5. ಸರ್ಕಾರದ ಆದೇಶ ಸಂಖ್ಯೆ:ಸಕಇ 12 ಪವಯೋ 2013 ದಿನಾಂಕ:22.01.2013
6. ಭಾರತ ಸರ್ಕಾರದ ಪತ್ರ ಸಂಖ್ಯೆ: 14020/4(11)/2012-ಎಸ್‌ಜಿ-1, ದಿನಾಂಕ:26-12-2012.
7. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರ ಏಕಕಡತ ಸಂಖ್ಯೆ:ಪವಕನಿ:ಇಡಿ-2:ಸಿಆರ್108:09-10, ದಿನಾಂಕ:10-01-2013.

*********

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಭಾರತ ಸರ್ಕಾರದ ಪತ್ರದಲ್ಲಿ 2010-11ನೇ ಸಾಲಿನಲ್ಲಿ ಭಾರತ ಸಂವಿಧಾನ ಅನುಚ್ಛೇದ 275(1)ರಡಿ ರಾಜ್ಯದಲ್ಲಿ ಹೊಸದಾಗಿ ಪರಿಶಿಷ್ಟ ವರ್ಗದ 06 ಏಕಲವ್ಯ ಮಾದರಿ ವಸತಿಶಾಲೆಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡುತ್ತಾ, ಪ್ರತಿ ವಸತಿಶಾಲೆಗೆ ರೂ.10.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಕಟ್ಟಡ ನಿರ್ಮಾಣ ಕೈಗೊಳ್ಳುವಂತೆಯೂ ಸಹ ತಿಳಿಸಲಾಗಿದೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ ಹೊಸದಾಗಿ ಮಂಜೂರಾಗಿರುವ ಪರಿಶಿಷ್ಟ ವರ್ಗದ 6 ಏಕಲವ್ಯ ಮಾದರಿ ವಸತಿಶಾಲೆಗಳ ಕಟ್ಟಡ ಕಾಮಗಾರಿಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಬೆಂಗಳೂರು ಇವರ ಮೂಲಕ ನಿರ್ಮಿಸುವ ಸಲುವಾಗಿ ಮೊದಲ ಕಂತಿನಲ್ಲಿ ತಲಾ ರೂ.4.00 ಕೋಟಿಗಳಂತೆ ಒಟ್ಟು ರೂ.24.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. ಬಿಡುಗಡೆ ಮಾಡಿದ ಅನುದಾನವನ್ನು ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇವರಿಗೆ ಚೆಕ್ ಮೂಲಕ ನೀಡಲಾಗಿರುತ್ತದೆ. ಮೇಲೆ ಓದಲಾದ (3)ರ ಕೇಂದ್ರ ಸರ್ಕಾರದ ಆದೇಶದಲ್ಲಿ ಸದರಿ ವಸತಿಶಾಲೆಗಳ ಕಟ್ಟಡಗಳ ನಿರ್ಮಾಣ ಕಾಮಗಾರಿಗಳನ್ನು ಮುಂದುವರೆಸಲು 2ನೇ ಕಂತಿನಲ್ಲಿ ರೂ.6.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. ಈ ಮೊತ್ತವು ದಿನಾಂಕ:02.04.2012 ರಂದು ರಾಜ್ಯ ಸರ್ಕಾರದ ಖಾತೆಗೆ ಜಮೆಯಾಗಿರುತ್ತದೆ. ವಸತಿ ಶಾಲೆಗಳ ಕಟ್ಟಡ ಕಾಮಗಾರಿಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇವರ ಮೂಲಕ

ಮುಂದುವರೆಸಲು ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ರೂ.6.00 ಕೋಟಿಗಳ ಅನುದಾನ ಬಿಡುಗಡೆ ಮಾಡುವಂತೆ ಮೇಲೆ ಓದಲಾದ (4)ರ ಏಕಕಡತದಲ್ಲಿ ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರು ಕೋರಿದ್ದರು. ಅದರಂತೆ ಮೇಲೆ ಓದಲಾದ (5)ರ ಸರ್ಕಾರದ ಆದೇಶದಲ್ಲಿ ರೂ.6.00 ಕೋಟಿಗಳನ್ನು ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ನಿರ್ದೇಶನಾಲಯರವರಿಗೆ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ (6)ರ ಕೇಂದ್ರ ಸರ್ಕಾರದ ಆದೇಶದಲ್ಲಿ ಸದರಿ ವಸತಿಶಾಲೆಗಳ ಕಟ್ಟಡಗಳ ನಿರ್ಮಾಣ ಕಾಮಗಾರಿಗಳನ್ನು ಮುಂದುವರೆಸಲು 2ನೇ ಕಂತಿನಲ್ಲಿ ರೂ.450.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಈ ಮೊತ್ತವು ದಿನಾಂಕ:31.12.2012 ರಂದು ರಾಜ್ಯ ಸರ್ಕಾರದ ಖಾತೆಗೆ ಜಮೆಯಾಗಿರುತ್ತದೆ. ವಸತಿ ಶಾಲೆಗಳ ಕಟ್ಟಡ ಕಾಮಗಾರಿಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇವರ ಮೂಲಕ ಮುಂದುವರೆಸಲು ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ರೂ.450.00 ಲಕ್ಷಗಳ ಅನುದಾನ ಬಿಡುಗಡೆ ಮಾಡುವಂತೆ ಮೇಲೆ ಓದಲಾದ (7)ರ ಏಕಕಡತದಲ್ಲಿ ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಕಇ 17 ಪವಯೋ 2012, ಬೆಂಗಳೂರು ದಿನಾಂಕ:13-02-2013**

ಭಾರತ ಸರ್ಕಾರದ ಬುಡಕಟ್ಟು ವ್ಯವಹಾರಗಳ ಮಂತ್ರಾಲಯವು ಒದಗಿಸಿರುವ ಅನುದಾನದಲ್ಲಿ ಈ ಕೆಳಕಂಡ ಸ್ಥಳಗಳಲ್ಲಿ ತಲಾ ಒಂದೊಂದು ಪರಿಶಿಷ್ಟ ವರ್ಗದ ಏಕಲವ್ಯ ಮಾದರಿ ಶಾಲಾ ಕಟ್ಟಡ ಕಾಮಗಾರಿಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಘ ಸಂಸ್ಥೆಯ ಮೂಲಕ ಮುಂದುವರೆಸುವ ಸಲುವಾಗಿ ರೂ.450.00 ಲಕ್ಷಗಳ (ನಾಲ್ಕುನೂರ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಅನುದಾನವನ್ನು ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರಿಗೆ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

| ಕ್ರ.ಸಂ | ಜಿಲ್ಲೆ | ತಾಲ್ಲೂಕು | ಮಂಜೂರಾದ ಸ್ಥಳ |
|---|---|---|---|
| 1 | ಚಿತ್ರದುರ್ಗ | ಹಿರಿಯೂರು | ದೇವರಕೊಟ್ಟ |
| 2 | ಬಳ್ಳಾರಿ | ಬಳ್ಳಾರಿ | ಕೊಳಗಲ್ಲು |
| 3 | ತುಮಕೂರು | ಕೊರಟಗೆರೆ | ಬಜ್ಜನಹಳ್ಳಿ |
| 4 | ಮೈಸೂರು | ಹೆಚ್.ಡಿ.ಕೋಟೆ | ಸೊಳ್ಳೆಪುರ |
| 5 | ಚಾಮರಾಜನಗರ | ಕೊಳ್ಳೇಗಾಲ | ಮಂಗಲ |
| 6 | ಗುಲ್ಬರ್ಗಾ | ಚಿತ್ತಾಪುರ | ಕೆ.ಕೆ. ನಾಗಾಂವ ಡಿಗ್ಗಿತಾಂಡಾ(ಕೊಂಚೂರು) |

ಆ ಸಂಬಂಧ ವೆಚ್ಚವನ್ನು 2012-13ನೇ ಸಾಲಿನ ರಾಜ್ಯವಲಯ ಯೋಜನಾ ಲೆಕ್ಕಶೀರ್ಷಿಕೆ 2225-02-794-0-03 ರಡಿ ನಿಗದಿಪಡಿಸಿರುವ ರೂ.50.00 ಲಕ್ಷಗಳಲ್ಲಿ ಭರಿಸುವುದು.

ಈ ಉದ್ದೇಶಕ್ಕಾಗಿ ಬಿಡುಗಡೆಯಾದ ಅನುದಾನವನ್ನು ಉದ್ದೇಶಿತ ಕಾರ್ಯಕ್ರಮಕ್ಕೆ ಪೂರ್ಣವಾಗಿ ಬಳಕೆ ಮಾಡಿ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಸಕಕಾ 419 ಆಂಆಸ 2012 ದಿನಾಂಕ:22-01-2013ರ ಸಹಮತಿ ಮೇರೆಗೆ ಹಾಗೂ ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 04 ಟಿಎಫ್‌ಡಿ 2012 ದಿನಾಂಕ:27-04-2012ರಲ್ಲಿ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ
13/2

**ಇವರಿಗೆ**

1. ಮಹಾಲೇಖಪಾಲರು, (ಎ ಮತ್ತು ಇ ಲೆಕ್ಕ ಪರಿಶೋಧನೆ-1, ಲೆಕ್ಕ ಪರಿಶೋಧನೆ-1, ಕರ್ನಾಟಕ, ಪಾರ್ಕ್‌ಹೌಸ್, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು
5. ಉಪ ನಿರ್ದೇಶಕರು, ಖಜಾನೆ ಗಣಕಜಾಲ, ಖನಿಜ ಭವನ, ಬೆಂಗಳೂರು.
6. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ಶಾಖಾ ರಕ್ಷಾ ಕಡತ
8. ಹೆಚ್ಚುವರಿ ಪ್ರತಿ-03